ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ ಇವರು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:

**ವಿಷಯ:** ರಾಜ್ಯದಲಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳಾದ ಸ್ವಂತ ಕಟ್ಟಡ, ಗಾಳಿ ಬೆಳಕಿಲ್ಲದ, ತಗಡಿನ ಸೂರುಗಳಲ್ಲಿ ಶಾಲೆಗಳಿರುವುದು ಹಾಗೂ ಅತಿ ಚಿಕ್ಕ ಚಿಕ್ಕ ಬಾಡಿಗೆ ಜಾಗದಲ್ಲಿ ಕೆಲವೆಡೆ ವಿದ್ಯುತ್ ಹಾಗೂ ಕುಡಿಯುವ ನೀರು, ಶೌಚಾಲಯ ಸೌಲಭ್ಯಗಳಿಲ್ಲದೆ ತೊಂದರೆಯಾಗುತ್ತಿರುವ ಸದರಿ ಕೇಂದ್ರಗಳಿಗೆ ಕಳಪೆ ಗುಣಮಟ್ಟದ ಆಹಾರ ಸರಬರಾಜಿನಿಂದ ತೊಂದರೆ ಆಗುತ್ತಿರುವ ಸಾರ್ವಜನಿಕ ಮಹತ್ವದ ವಿಷಯವನ್ನು ಪ್ರಸ್ತಾಪಿಸಿರುವ ಬಗ್ಗೆ."

**ಉತ್ತರ:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಪ್ರಸ್ತುತ ರಾಜ್ಯದಲ್ಲಿ 67590 ಮುಖ್ಯ ಅಂಗನವಾಡಿ ಹಾಗೂ 2329 ಮಿನಿ ಅಂಗನವಾಡಿ ಕೇಂದ್ರಗಳನ್ನೊಳಗೊಂಡಂತೆ ಒಟ್ಟು 69919 ಅಂಗನವಾಡಿ ಕೇಂದ್ರಗಳಿವೆ. ಈ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವ ಸ್ಥಳಗಳ ಮಾಹಿತಿ ಈ ಕೆಳಕಂಡಂತಿದೆ.

| | |
|---|---|
| ಸ್ವಂತ ಕಟ್ಟಡ | 47236 |
| ಪಂಚಾಯತ್ ಕಟ್ಟಡ | 1108 |
| ಸಮುದಾಯ ಭವನ | 2710 |
| ಶಾಲಾ ಆವರಣ | 4870 |
| ಪರ್ಯಾಯ ವ್ಯವಸ್ಥೆ | 1236 |
| ಬಾಡಿಗೆ ಕಟ್ಟಡ | 12653 |
| ಯುವಕ ಮಂಡಳ | 62 |
| ಮಹಿಳಾ ಮಂಡಳ | 44 |
| **ಒಟ್ಟು** | **69919** |

ರಾಜ್ಯದ ಬಹುತೇಕ ಬಾಡಿಗೆ ಮತ್ತು ಇತರೆ ವ್ಯವಸ್ಥೆಯೊಂದಿಗೆ ನಿರ್ವಹಿಸುತ್ತಿರುವ ಅಂಗನವಾಡಿ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯಗಳಾದ ವಿದ್ಯುತ್ ಸಂಪರ್ಕ, ಕುಡಿಯುವ ನೀರು ಮತ್ತು ಶೌಚಾಲಯ ವ್ಯವಸ್ಥೆಯೊಂದಿಗೆ ಕಟ್ಟಡಗಳ ವ್ಯವಸ್ಥೆ ಮಾಡಿಕೊಳ್ಳಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡಲಾಗಿದೆ.

ರಾಜ್ಯದ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ವಾರ್ಷಿಕವಾಗಿ ಅನುದಾನ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತ-ಹಂತವಾಗಿ ಕ್ರಮ ವಹಿಸಲಾಗುತ್ತಿದೆ. ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನೊಳಗೊಂಡ ಬಾಡಿಗೆ ಕಟ್ಟಡಗಳನ್ನು ಹಾಗೂ ಇತರೆ ಸರ್ಕಾರಿ ಕಟ್ಟಡಗಳನ್ನು ಒದಗಿಸಿಕೊಳ್ಳಲು ಕ್ರಮ ವಹಿಸಲಾಗಿದೆ. ವಿದ್ಯುತ್ ಹಾಗೂ ಕುಡಿಯುವ ನೀರು, ಶೌಚಾಲಯ ಒಳಗೊಂಡಂತೆ ಮೂಲಭೂತ ಸೌಲಭ್ಯ ಇರುವ ಬಾಡಿಗೆ/ಇತರೆ ಕಟ್ಟಡಗಳಿಗೆ ಸ್ಥಳಾಂತರಿಸಲು ಆದ್ಯತೆ ಮೇರಗೆ ಕ್ರಮ ವಹಿಸಲಾಗುತ್ತಿದೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ಯೋಜನೆಯಡಿ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಿಸುವ ಆಹಾರ ಪದಾರ್ಥಗಳ ವಿತರಣೆಗೆ ಮುನ್ನ NABL (National Accreditation Board for Testing and Calibration Laboratories) ನಲ್ಲಿ ನೋಂದಾಯಿತವಾದ ಪ್ರಯೋಗಾಲಯಗಳ ಮೂಲಕ ಆಹಾರದಲ್ಲಿನ ಪೌಷ್ಠಿಕಾಂಶಗಳ ಗುಣಮಟ್ಟ ಮತ್ತು ನಿಯತಾಂಕಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ BIS ಗುಣಮಟ್ಟದ ಪ್ರಮಾಣ ಪತ್ರ ಹೊಂದಿದ ಮಹಿಳಾ ಗುಂಪುಗಳಿಂದ ತಾಂತ್ರಿಕ ಸಲಹೆಯನ್ನು ಪಡೆದು ಉತ್ತಮ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.

ಮುಂದುವರೆದು, ಸಂಬಂಧಪಟ್ಟ ಅಂಗನವಾಡಿಗಳ ಮೇಲ್ವಿಚಾರಕಿಯರು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ನಿರೂಪಣಾಧಿಕಾರಿಗಳು ಮತ್ತು ಜಿಲ್ಲಾ ಉಪ ನಿರ್ದೇಶಕರುಗಳು, ನಿರ್ದೇಶಕರು, ಸರ್ಕಾರದ ಕಾರ್ಯದರ್ಶಿಗಳು ಮತ್ತು ಇಲಾಖಾ ಸಚಿವರು ಪೂರಕ ಪೌಷ್ಠಿಕ ಆಹಾರದ ತಯಾರಿಕೆ, ಸರಬರಾಜಿನ ಕೇಂದ್ರ (ಎಂ.ಎಸ್.ಪಿ.ಸಿ. ಘಟಕಗಳಿಗೆ) ಮತ್ತು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಆಹಾರ ಪದಾರ್ಥ ವಿತರಣೆ ಹಾಗೂ ಗುಣಮಟ್ಟದ ಬಗ್ಗೆ ಖಾತರಿಪಡಿಸಿಕೊಳ್ಳಲಾಗುತ್ತಿದೆ. ಬಾಲವಿಕಾಸ ಸಮಿತಿಯ ಸದಸ್ಯರುಗಳು ಫಲಾನುಭವಿಗಳಿಗೆ ವಿತರಿಸಲಾಗುತ್ತಿರುವ ಪೂರಕ ಪೌಷ್ಠಿಕ ಆಹಾರವನ್ನು ಪರಿಶೀಲಿಸಲಾಗುತ್ತಿದೆ.

ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಆಹಾರ ಪದಾರ್ಥಗಳನ್ನು ಸಮರ್ಪಕವಾಗಿ ಶೇಖರಣೆ ಮಾಡಲು, ಸ್ವಚ್ಛತೆ ಕಾಪಾಡಲು ಹಾಗೂ ನೈರ್ಮಲ್ಯ ಕಾಪಾಡಿಕೊಳ್ಳಲು ಕಾಲಕಾಲಕ್ಕೆ ಅಗತ್ಯ ಸಭೆಗಳು ನಡೆಸಿ ಸೂಚನೆ ನೀಡಲಾಗುತ್ತಿದೆ. ನಿರ್ದಿಷ್ಟ ಪ್ರಕರಣಗಳಲ್ಲಿ ದೂರು ಬಂದಲ್ಲಿ ಕೂಡಲೇ ಅಗತ್ಯ ಕ್ರಮ ಕೈಗೊಂಡು ಗುಣಮಟ್ಟದ ಆಹಾರ ವಿತರಣೆಗೆ ಕ್ರಮವಹಿಸಲಾಗುತ್ತಿದೆ.

ಈ ಮೇಲ್ಕಂಡಂತೆ ಆಹಾರ ಗುಣಮಟ್ಟ ಮತ್ತು ವಿತರಣೆ ಕುರಿತಂತೆ ಅಗತ್ಯ ಕ್ರಮಗಳನ್ನು ವಹಿಸುತ್ತಿದ್ದು, ಕಳಪೆ ಗುಣಮಟ್ಟದ ಆಹಾರವು ಅಂಗನವಾಡಿ ಕೇಂದ್ರಗಳಿಗೆ ಸರಬರಾಜಾಗದಂತೆ ಆದ್ಯತೆ ಮೇರೆಗೆ ಸೂಕ್ತ ಕಾಳಜಿ ವಹಿಸಲಾಗುತ್ತಿದೆ.

**ಸಂಖ್ಯೆ: ಮಮಇ 137 ಐಸಿಡಿ 2024**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.